# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1529 (1854)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಕಾರ್ಮಿಕ ಸಚಿವರು

ವಿಷಯ : ಕಾರ್ಮಿಕರ ಶೋಷಣೆ ತಡೆಗಟ್ಟುವುದು

(ಅ) ಅನೇಕ ಖಾಸಗಿ ಸಂಸ್ಥೆಗಳಲ್ಲಿ ಕಾರ್ಮಿಕರನ್ನು ಶೋಷಣೆ ಮಾಡುತ್ತಿದ್ದು ಈ ವಿಚಾರದಲ್ಲಿ ಕಾರ್ಮಿಕ ಇಲಾಖೆ ಯಾವ ರೀತಿ ಕ್ರಮ ತೆಗೆದುಕೊಂಡಿದೆ; ತನಿಖೆ ಮಾಡಲಾಗಿರುವುದು ಎಷ್ಟು; (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

(ಆ) ಕಾರ್ಮಿಕರ ರಕ್ಷಣೆಗೆ ಯಾವ ಯಾವ ಕಾನೂನುಗಳಿವೆ; ಇದರ ಅನುಷ್ಠಾನ ಸಮರ್ಪಕವಾಗಿ ನಡೆಯುತ್ತಿದೆಯೇ; ಅಧಿಕಾರಿಗಳು ಸ್ವತಃ ಭೇಟಿ ನೀಡಿ ತಪಾಸಣೆ ಮಾಡಿ ತಪ್ಪಿತಸ್ಥ ಮಾಲೀಕರ ಮೇಲೆ ಕ್ರಮ ತೆಗೆದುಕೊಳ್ಳಲಾಗುತ್ತಿದೆಯೇ;

(ಇ) ಕಾರ್ಮಿಕರ ಕೆಲಸದ ಅವಧಿ ರಜೆ ಸೌಲಭ್ಯ ಆರೋಗ್ಯ ವ್ಯವಸ್ಥೆ ಇದರ ಬಗ್ಗೆ ತಪಾಸಣೆ ಮಾಡಿ ಕಾರ್ಮಿಕರ ಹಿತರಕ್ಷಣೆ ಮಾಡಲು ನೇಮಕವಾಗಿರುವ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಣೆ ಮಾಡುತ್ತಿದ್ದಾರೆಯೇ; ಕಾರ್ಮಿಕ ಆಯುಕ್ತರು /ಹಿರಿಯ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆಯೇ; ಈ ಕುರಿತು ಜಾಲ್ತಿಯಲ್ಲಿರುವ ವ್ಯವಸ್ಥೆ ಏನು?